ದಿನಾಂಕಃ **20-09-2025** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಕೆ ಆರ್ ಡಿ ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಸಲ್ಲಿಸಿರುವ ಅಂಶಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಹೇಳಿರುವ ಅಂಶಗಳೆಲ್ಲಾ ಸತ್ಯವಾಗಿರುತ್ತದೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಈ ಕೆಳಗಿನ ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದು ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಿಕೊಳ್ಳಲು ಕೋರುತ್ತೇನೆ.

1. ದಾವಾ ಸ್ವತ್ತಿಗೆ ಸಂಬಂಧಪಟ್ಟಿರುವ ದಿಃ11-10-2002 ರ ನೊಂದಾಯಿತ ಹಕ್ಕು ನಿವೃತ್ತ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-1 ಎಂದು ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಡಿ-1(ಎ) ಗುರುತಿಸಲಾಯಿತು. ಅದರಲ್ಲಿರುವ ಸಾಕ್ಷಿದಾರರ ಸಹಿಗಳನ್ನು ನಿಡಿ-1(ಬಿ) ಮತ್ತು (ಸಿ) ಎಂದು ಗುರುತಿಸಲಾಯಿತು. ನಿಡಿ-1 ರಲ್ಲಿ ಇರುವ ಸಾಕ್ಷಿದಾರರು ಮರಣ ಹೊಂದಿರುತ್ತಾರೆ.

ದಿಃ12-07-2015 ರ ಹಕ್ಕು ನಿವೃತ್ತ ರದ್ದಿಯ ಪತ್ರವನ್ನು ನಿಡಿ2 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಡಿ-2(ಎ) ಗುರುತಿಸಲಾಯಿತು. ನಿಡಿ-2 ರಲ್ಲಿ ಸಾಕ್ಷಿಯ ತಂದೆಯ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಡಿ-2(ಬಿ) ಎಂದು ಗುರುತಿಸಲಾಯಿತು. ನಿಡಿ-2 ರಲ್ಲ್ಕಿ ಇರುವ ಸಾಕ್ಷಿದಾರರ ಸಹಿಗಳನ್ನು ನಿಡಿ-2(ಸಿ) ಮತ್ತು (ಡಿ) ಎಂದು ಗುರುತಿಸಲಾಯಿತು. ನಿಡಿ-2 ರಲ್ಲಿ ಇರುವ ಸಾಕ್ಷಿದಾರರು ಜೀವಂತ ಇದ್ದಾರೆ
ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶವನ್ನು ಕೋರಿದ್ದು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಅಧಿಕ ಸಿವಿಲ್ ನ್ಯಾಯಾಧೀಶರು
ತಿಪಟೂರು.